# ಕರ್ನಾಟಕ ಸರ್ಕಾರ

**ಸಂಖ್ಯೆ:** ಪಪೂಶಿಇ/ಇ-ಆಡಳಿತ/ಮೊ.ಸಿಯುಜಿ-1/2014-15

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560012.
ದಿನಾಂಕ: 25-11-2014.

## ಜ್ಞಾಪನ

**ವಿಷಯ:** ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ, ಜಿಲ್ಲಾ ಉಪನಿರ್ದೇಶಕರಿಗೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ ಒದಗಿಸಿರುವ ಬಿಎಸ್‌ಎನ್‌ಎಲ್ ಸಿಯುಜಿ ಮೊಬೈಲ್ ಸಂಪರ್ಕವನ್ನು ದಿನದ 24 ಗಂಟೆ ಚಾಲನೆಯಲ್ಲಿರಿಸುವ ಕುರಿತು.

**ಉಲ್ಲೇಖ:** ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ: 01-10-2014

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಕಾರ್ಯಗಳನ್ನು ಸುಗಮಗೊಳಿಸಲು ಇಲಾಖಾ ಅಧಿಕಾರಿಗಳಿಗೆ, ಜಿಲ್ಲಾ ಉಪನಿರ್ದೇಶಕರಿಗೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ ಬಿಎಸ್‌ಎನ್‌ಎಲ್ ಸಿಯುಜಿ ಮೊಬೈಲ್ ಸಂಪರ್ಕವನ್ನು ಕಲ್ಪಿಸಿದ್ದರೂ ಕೂಡ, ಅನೇಕ ಅಧಿಕಾರಿಗಳು ಈ ಸೌಲಭ್ಯವನ್ನು ಅಳವಡಿಸದೇ ಇರುವುದು ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ ಸೂಚಿಸುವುದೇನೆಂದರೆ, ಈ ಕೂಡಲೇ ತಮಗೆ ಒದಗಿಸಿರುವ ಸಿಮ್‌ಗಳನ್ನು ದಿನದ 24 ಗಂಟೆಯೂ ಚಾಲನೆಯಲ್ಲಿರಿಸಿ ಇಲಾಖಾ ಕರೆಗಳನ್ನು ಸ್ವೀಕರಿಸುವುದು. ಇಲ್ಲವಾದಲ್ಲಿ ತಮ್ಮ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು.

ತಮ್ಮ ವಿಶ್ವಾಸಿ,

ಜಂಟಿ ನಿರ್ದೇಶಕರು(ಶೈಕ್ಷಣಿಕ),
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ,

1. ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
2. ಇ-ಆಡಳಿತ ಶಾಖೆಗೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಅಂತರ್ಜಾಲದಲ್ಲಿ ಅಳವಡಿಸಲು.
3. ಸಿಯುಜಿ ಮೊಬೈಲ್ ಸಂಪರ್ಕ ಹೊಂದಿರುವ ಎಲ್ಲಾ ಅಧಿಕಾರಿಗಳಿಗೆ.
4. ಕಛೇರಿ ಪ್ರತಿ.